ಆ) 1996-97ನೇ ಸಾಲಿಗೆ (31-3-97)ಕ್ಕೆ ಕೊನೆಗೊಂಡಂತೆ ಎಲ್ಲಾ ವಿಭಾಗಗಳಲ್ಲಿ ಒಟ್ಟು ರೂ.734.60 ಕೋಟಿಗಳಷ್ಟು ತೆರಿಗೆ ಬಾಕಿ ಇರುತ್ತದೆ. 1997-98ನೇ ಸಾಲಿಗೆ (31-3-97)ಕ್ಕೆ ಕೊನೆಗೊಂಡಂತೆ ಎಲ್ಲಾ ವಿಭಾಗಗಳಲ್ಲಿ ಒಟ್ಟು ರೂ.783.02 ಕೋಟಿಗಳಷ್ಟು ತೆರಿಗೆ ಬಾಕಿ ಇರುತ್ತದೆ. (ನಿಖರವಾದ ಪ್ರಕರಣವಾರು ಮಾಹಿತಿಯು ಸದ್ಯಕ್ಕೆ ಲಭ್ಯವಿರುವುದಿಲ್ಲ)

ಇ) ವಾಣಿಜ್ಯ ತೆರಿಗೆ ಇಲಾಖೆಯ ಅಧೀನದಲ್ಲಿರುವ ಎಲ್ಲಾ ಅಧಿನಿಯಮಗಳಡಿ ಲಭ್ಯವಿರುವ ವಿಧಾನಗಳನ್ನು ಅನುಸರಿಸಿ ಬಾಕಿ ವಸೂಲಾತಿಗೆ ತಕ್ಕ ಕ್ರಮ ತೆಗೆದುಕೊಳ್ಳುವಂತೆ ಅಧಿಕಾರಿಗಳಿಗೆ ಸ್ಪಷ್ಟ ಸೂಚನೆಗಳನ್ನು ನೀಡಲಾಗುತ್ತಿದೆ.

ಉಪ್ಪಿನಂಗಡಿ-ಸುಬ್ರಹ್ಮಣ್ಯ ರಸ್ತೆ ಡಾಂಬರೀಕರಣ

2919:(3918)

ಡಿ.ವಿ.ಸದಾನಂದ ಗೌಡ (ಪುತ್ತೂರು) ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಉಪ್ಪಿನಂಗಡಿ ಸುಬ್ರಹ್ಮಣ್ಯ ರಸ್ತೆ ಕಳೆದ ಎಷ್ಟು ವರ್ಷಗಳಿಂದ ಡಾಂಬರೀಕರಣ ಮಾಡಿಲ್ಲ? ಅದನ್ನು ಯಾವಾಗ ಮಾಡಲಾಗುವುದು?

ಶ್ರೀ ಸಿ.ಎಂ.ಉದಾಸಿ (ಲೋಕೋಪಯೋಗಿ ಸಚಿವರು):

1) ಕಳೆದ 15 ವರ್ಷಗಳಿಂದ ಡಾಂಬರೀಕರಣ ಮಾಡಿರುವುದಿಲ್ಲ. ವಾರ್ಷಿಕ ದುರಸ್ತಿ ಮಾಡಲಾಗುತ್ತಿದೆ. ಅನುದಾನದ ಲಭ್ಯತೆಯ ಮೇರೆಗೆ ಮರು ಡಾಂಬರೀಕರಣ ಮಾಡಲಾಗುವುದು.

ಮೈಸೂರಿನ ಕುಂಬಾರ ಕೊಪ್ಪಲಿನಲ್ಲಿರುವ ಕ್ರೀಡಾಂಗಣ ಅಭಿವೃದ್ಧಿ.

2920:(3954)

ಶ್ರೀ ಹೆಚ್.ಎಸ್.ಶಂಕರಲಿಂಗೇಗೌಡ (ಚಾಮರಾಜ): ಮಾನ್ಯ ಯುವಜನ ಸೇವಾ ಮತ್ತು ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೈಸೂರಿನ ಕುಂಬಾರ ಕೊಪ್ಪಲ್ಲಿನಲ್ಲಿರುವ ಕ್ರೀಡಾಂಗಣವನ್ನು ಅಭಿವೃದ್ಧಿಪಡಿಸಲು ಸರ್ಕಾರದವರು ಕೈಗೊಂಡಿರುವ ಕ್ರಮವೇನು?

ಆ) ಇದಕ್ಕೆ ತಗಲುವ ಅಂದಾಜು ವೆಚ್ಚವೆಷ್ಟು?